## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಎ.ಎ.ಹುಲಗೇರಿ, ನಿವೃತ್ತ ಜಿಲ್ಲಾ ಮತ್ತು ಸೇಷನ್ಸ್ ನ್ಯಾಯಾಧೀಶರು ಹಾಗೂ ವಿಚಾರಣಾಧಿಕಾರಿಗಳು, ಧಾರವಾಡ ಇವರಿಗೆ ಸಂಭಾವನೆ ಮಂಜೂರು ಮಾಡುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 45 ಸೇಇವಿ 2014, ದಿನಾಂಕ:08.1.2015.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 12 ಇಎನ್‌ಕ್ಯೂ 15, ದಿನಾಂಕ:28.10.2015
3. ವಿಚಾರಣ ವರದಿ ದಿನಾಂಕ:25.7.2016 .

ಐದು ಆರೋಪಿತ ವ್ಯಕ್ತಿಗಳಿಗಿಂತ ಹೆಚ್ಚಿನ ಆರೋಪಿತರನ್ನು ಒಳಗೊಂಡಿರುವ ಜಂಟಿ ಇಲಾಖಾ ವಿಚಾರಣ ಪ್ರಕರಣಗಳಲ್ಲಿ ವಿಚಾರಣಾಧಿಕಾರಿಯಾಗಿ ನೇಮಕವಾಗುವ ನಿವೃತ್ತ ಜಿಲ್ಲಾ ನ್ಯಾಯಾಧೀಶರಿಗೆ ಒಟ್ಟು ರೂ 25,000/-ಗಳ ಸಂಭಾವನೆಯನ್ನು ಪಾವತಿಸಲು ಮೇಲೆ ಕ್ರಮಾಂಕ (1) ರಲ್ಲಿ ಓದಲಾದ ದಿನಾಂಕ:08.1.2015 ರ ಸರ್ಕಾರದ ಆದೇಶದಲ್ಲಿ ತಿಳಿಸಲಾಗಿದೆ.

ಹೈದ್ರಾಬಾದ್- ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ರಾಯಚೂರು ಜಿಲ್ಲಾ ಪಂಚಾಯತ್‌ಗೆ ಬಿಡುಗಡೆಯಾದ ಅನುದಾನವನ್ನು ಅಲ್ಲಿನ ಅನುಷ್ಠಾನಾಧಿಕಾರಿಗಳು ಸಮರ್ಪಕವಾಗಿ ಬಳಸಿಕೊಳ್ಳದೇ ಹಣ ದುರುಪಯೋಗಪಡಿಸಿಕೊಂಡಿರುತ್ತಾರೆ ಎಂಬ ಆರೋಪಗಳಿಗೆ ಸಂಬಂಧಿಸಿದಂತೆ ಒಟ್ಟು 20 ಅಧಿಕಾರಿ/ನೌಕರರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಶ್ರೀ ಎ.ಎ.ಹುಲಗೇರಿ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಗಳನ್ನಾಗಿ ನೇಮಕ ಮಾಡಲಾಗಿತ್ತು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣೆ ಜರುಗಿಸಿ, ಮೇಲೆ ಕ್ರಮಾಂಕ(3) ರಲ್ಲಿ ಓದಲಾದ ದಿನಾಂಕ:25.7.2016 ರಂದು ವಿಚಾರಣಾ ವರದಿ ಸಲ್ಲಿಸಿರುತ್ತಾರೆ. ಆದುದರಿಂದ ವಿಚಾರಣಾಧಿಕಾರಿಗೆ ನಿಯಮಾನುಸಾರ ಸಂಭಾವನೆ/ಭತ್ಯೆ ಮಂಜೂರು ಮಾಡಲು ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ:ಗ್ರಾಅಪ 12 ಇಎನ್‌ಕ್ಯೂ 15, ಬೆಂಗಳೂರು, ದಿನಾಂಕ:21.10.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಶ್ರೀ ಎ.ಎ.ಹುಲಗೇರಿ, ನಿವೃತ್ತ ಜಿಲ್ಲಾ ಮತ್ತು ಸೇಷನ್ಸ್ ನ್ಯಾಯಾಧೀಶರು/ವಿಚಾರಣಾಧಿಕಾರಿಗಳು ಇವರಿಗೆ ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 45 ಸೇಇವಿ 2014, ದಿನಾಂಕ:08.1.2015 ರಲ್ಲಿ ನಿಗದಿಪಡಿಸಿರುವ ಸಂಚಿತ ಸಂಭಾವನೆ ಮೊತ್ತ ರೂ.25,000-00 (ಇಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಪಾವತಿಸಲು ಮಂಜೂರಾತಿ ನೀಡಿದೆ.

ಸದರಿ ಮೊತ್ತವನ್ನು ಶ್ರೀ ಎ.ಎ.ಹುಲಗೇರಿ, ವಿಚಾರಣಾಧಿಕಾರಿಯವರು ಇವರಿಗೆ ಪಾವತಿಸಲು ಕೂಡಲೇ ಕ್ರಮವಹಿಸುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು ಇವರಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಿದ್ದೇಶ ಪೊಲಕಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು,(ಲೆಕ್ಕ ಪತ್ರ 1&2)/(ಆಡಿಟ್) ಕರ್ನಾಟಕ, ಬೆಂಗಳೂರು.

2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು- ವಿಚಾರಣಾಧಿಕಾರಿಯವರ ಹೆಸರಿಗೆ ಚೆಕ್ ಬರೆದು ಅವರ ವಿಳಾಸಕ್ಕೆ ನೊಂದಣಿ ಅಂಚೆ ಮುಖಾಂತರ ಕಳುಹಿಸುವಂತೆ ಕೋರಿದೆ.
3. ಎ.ಎ.ಹುಲಗೇರಿ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಯೀಮ್ ಮಂಜಿಲ್, 2 ನೇ ಮುಖ್ಯ ರಸ್ತೆ, 8 ನೇ ಕ್ರಾಸ್, ಶಿವಗಿರಿ, ಧಾರವಾಡ.-580007
4. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು.
6. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಉಪ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ/ ಆಪ್ತ ಸಹಾಯಕರು.
7. ಹೆಚ್ಚುವರಿ ಪ್ರತಿ :ಶಾಖಾ ರಕ್ಷಾ ಕಡತ:ಕಂಪ್ಯೂಟರ್ ಶಾಖೆ.